ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪೊ. ಗೃಹ -

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 8/1/2021

ಸೈಬರ್, ಆರ್ಥಿಕ ಅಪರಾಧ ಭೇದಿಸಲು ಹೆಚ್ಚಿನ ತರಬೇತಿ • ಪದಕ ವಿತರಣೆ

# 'ಪೊಲೀಸ್ ವ್ಯವಸ್ಥೆಗೆ ಆಧುನಿಕ ತಂತ್ರಜ್ಞಾನ'

ಪ್ರಜಾವಾಣಿ ವಾರ್ತೆ 8-1-2021

ಬೆಂಗಳೂರು: ಸೈಬರ್ ಮತ್ತು ಆರ್ಥಿಕ ಅಪರಾಧಗಳನ್ನು ಭೇದಿಸಲು ಪೊಲೀಸರಿಗೆ ಹೆಚ್ಚಿನ ತರಬೇತಿ, ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ರಾಜಭವನದ ಗಾಜಿನಮನೆಯಲ್ಲಿ ಗುರುವಾರ ಪೊಲೀಸ್ ಇಲಾಖೆ ಆಯೋಜಿಸಿದ್ದ ಪೊಲೀಸ್ ಪದಕ ಪ್ರದಾನ ಸಮಾರಂಭದಲ್ಲಿ ಮಾತನಾಡಿ, ಅತ್ಯಾಧುನಿಕ ತಂತ್ರಜ್ಞಾನದ ಬಲದಿಂದ ಪೊಲೀಸ್ ಪಡೆಗೆ ಹೆಚ್ಚಿನ ಶಕ್ತಿ ತುಂಬಲಾಗುವುದು ಎಂದು ಹೇಳಿದರು.

ಸೈಬರ್ ಅಪರಾಧಗಳ ಸಮರ್ಪಕ ತನಿಖೆಗಾಗಿ ಸುಸಜ್ಜಿತ ತನಿಖಾ ತರಬೇತಿ ಮತ್ತು ಸಂಶೋಧನಾ ಕೇಂದ್ರವನ್ನು ಬೆಂಗಳೂರಿನ ಸಿಐಡಿ ಮುಖ್ಯ ಕಚೇರಿಯಲ್ಲಿ ಸ್ಥಾಪಿಸಲಾಗಿದೆ. ಇವೆಲ್ಲ ಕಾರ್ಯಕ್ಕೆ ಅತ್ಯಾಧುನಿಕ ತಂತ್ರಜ್ಞಾನದ ನೆರವು ಬೇಕಿದೆ. ಅದನ್ನು ಒದಗಿಸಲಾಗುವುದು ಎಂದರು.

'ರಾಷ್ಟ್ರದಲ್ಲಿಯೇ ಅತ್ಯುತ್ತಮ ಪೊಲೀಸ್ ಪಡೆ ಎನ್ನುವ ಹೆಗ್ಗಳಿಕೆಯನ್ನು ಕರ್ನಾಟಕ ರಾಜ್ಯ ಪೊಲೀಸ್ ಪಡೆ ಪಡೆದಿದೆ. ಅತಿ ಸೂಕ್ಷ್ಮ ಪ್ರಕರಣಗಳನ್ನು ವಿಚಾರಣೆಗೆ ಗುರಿಪಡಿಸಿದ ನಮ್ಮ ಪೊಲೀಸ್ ಪಡೆಯ ಕ್ಷಮತೆ ಅದ್ವಿತೀಯವಾದುದು' ಎಂದು ಅವರು ಶ್ಲಾಘಿಸಿದರು.

'ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು, ಅಪರಾಧಗಳನ್ನು ತಡೆಗಟ್ಟಲು ಹಾಗೂ ಅಪರಾಧಿಗಳನ್ನು ಪತ್ತೆ ಮಾಡಲು ಹಬ್ಬ-ಹರಿದಿನಗಳೆನ್ನದೇ ಸದಾಕಾಲ ದಕ್ಷತೆಯಿಂದ ದಣಿವಿಲ್ಲದೇ ಪೊಲೀಸರು ಶ್ರಮಿಸುತ್ತಿದ್ದಾರೆ' ಎಂದು ಯಡಿಯೂರಪ್ಪ ಹೇಳಿದರು.

ಪೊಲೀಸ್ ಪದಕ ಪ್ರದಾನ ಮಾಡಿದ ರಾಜ್ಯಪಾಲ ವಜುಭಾಯಿ ವಾಲಾ ಮಾತನಾಡಿ, ಸಜ್ಜನರಿಗೆ ರಕ್ಷಣೆ ನೀಡಿ, ದುರ್ಜನ ಮನಸ್ಥಿತಿಯನ್ನು ಶಿಕ್ಷಿಸಬೇಕು. ಬದುಕಿರುವಷ್ಟು ದಿನ ಶೌರ್ಯ, ಪೌರುಷ ಮತ್ತು ಹೆಮ್ಮೆಯಿಂದ ಬದುಕಬೇಕುಎಂದು ಹೇಳಿದರು.

ರಾಜ್ಯದಲ್ಲಿ ಶಾಂತಿ ಕಾಪಾಡುವುದು ಪೊಲೀಸರ ಜವಾಬ್ದಾರಿಯಾಗಿದ್ದು, ಅವರು ತಮ್ಮ ಜವಾಬ್ದಾರಿಯನ್ನು ಉತ್ತಮ ರೀತಿಯಲ್ಲಿ ನಿರ್ವಹಿಸುತ್ತಿದ್ದಾರೆ. ಒಬ್ಬ ಸಾಮಾನ್ಯ ವ್ಯಕ್ತಿಯು ಪೊಲೀಸರನ್ನು ನೋಡಿದಾಗ ಸುರಕ್ಷಿತ ಭಾವನೆ ಮೂಡಬೇಕು ಎಂದು ತಿಳಿಸಿದರು.

ಪದಕ ಪಡೆದ ಅಧಿಕಾರಿಗಳು ರಾಜ್ಯದ ಜನರ ಸುರಕ್ಷತೆಯನ್ನು ಕಾಪಾಡಲು ಮತ್ತು ಉತ್ತಮವಾಗಿ ಕಾರ್ಯನಿರ್ವಹಿಸುವಂತೆ ತಮ್ಮ ಸಹೋದ್ಯೋಗಿಗಳಿಗೆ ಪ್ರೋತ್ಸಾಹಿಸಬೇಕು ಎಂದು ಅವರು ಸಲಹೆ ನೀಡಿದರು.

ಗಣರಾಜ್ಯೋತ್ಸವ ಮತ್ತು ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ನೀಡುವ ವಿಶೇಷ ಸೇವೆ ಸಲ್ಲಿಸಿದ 4 ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿಗಳ ಪದಕ ಮತ್ತು ಪ್ರಶಂಸನೀಯ ಸೇವೆ ಸಲ್ಲಿಸಿದ 74 ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪೊಲೀಸ್ ಪದಕ ಪ್ರದಾನ ಮಾಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಗೃಹ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ ಡಾ.ರಜನೀಶ್ ಗೋಯೆಲ್, ಡಿಜಿಪಿ ಪ್ರವೀಣ್ ಸೂದ್ ಇದ್ದರು.



ಪೊಲೀಸ್ ಪದಕ ಪಡೆದ ಅಧಿಕಾರಿಗಳ ಜತೆಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ರಾಜ್ಯಪಾಲ ವಜುಭಾಯಿ ವಾಲಾ, ಗೃಹ ಸಚಿವ ಬಸವರಾಜ ಬೊಮ್ಮಾಯಿ